# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 585 |
| ಮಾನ್ಯ ಸದಸ್ಯರ ಹೆಸರು | ಶ್ರೀ ಎಸ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 23/12/2022 |
| ಉತ್ತರಿಸುವ ಸಚಿವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರಕ್ಕೆ ಉತ್ತರ ಕರ್ನಾಟಕ ಹಾಗೂ ಇತರೆ ರಾಜ್ಯಗಳಿಂದ ಬರುವ ವಲಸೆ ಕಾರ್ಮಿಕರಿಗಾಗಿ ಸರ್ಕಾರವು ಯಾವ ಯೋಜನೆಗಳನ್ನು ಹಮ್ಮಿಕೊಂಡಿದೆ; (ವಿವರ ನೀಡುವುದು) | ಕಾರ್ಮಿಕ ಇಲಾಖೆ ವತಿಯಿಂದ ವಲಸೆ ಕಾರ್ಮಿಕರಿಗಾಗಿ ಪ್ರತ್ಯೇಕವಾಗಿ ಯಾವುದೇ ಯೋಜನೆಗಳನ್ನು ಹಮ್ಮಿಕೊಂಡಿರುವುದಿಲ್ಲ. ಆದರೆ, ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಮಂಡಳಿಗಳು ವಲಸೆ ಕಾರ್ಮಿಕರು ಸೇರಿದಂತೆ ಇತರೆ ಕಾರ್ಮಿಕರಿಗಾಗಿ ಹಲವಾರು ಯೋಜನೆಗಳನ್ನು ಜಾರಿಗೊಳಿಸುತ್ತಿದ್ದು, ವಿವರಗಳು ಈ ಕೆಳಗಿನಂತಿದೆ<br><br>**<u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ</u>**<br>ಈ ಮಂಡಳಿಯ ವತಿಯಿಂದ ರಾಜ್ಯದದ್ಯಾಂತ ಏಕ ರೂಪದಲ್ಲಿ ಎಲ್ಲಾ ಅರ್ಹ ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಮತ್ತು ಅವರ ಅವಲಂಭಿತರಿಗಾಗಿ ವಿವಿಧ ರೀತಿಯ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ರೂಪಿಸಲಾಗಿದೆ. ಸೌಲಭ್ಯಗಳ ವಿವರವನ್ನು **ಅನುಬಂಧ-1ರಲ್ಲಿ** ಲಗತ್ತಿಸಿದೆ. ಈ ಸೌಲಭ್ಯಗಳನ್ನು ಬೆಂಗಳೂರು ನಗರಕ್ಕೆ ಉತ್ತರ ಕರ್ನಾಟಕ ಹಾಗೂ ಇತರೆ ರಾಜ್ಯಗಳಿಂದ ಬರುವ ವಲಸೆ ನೋಂದಾಯಿತ ಕಾರ್ಮಿಕರು ಸಹ ಪಡೆಯಲು ಅರ್ಹರಿರುತ್ತಾರೆ.<br><br>ಮುಂದುವರೆದು, ವಲಸೆ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ದೊಡ್ಡಬಳ್ಳಾಪುರ ಜಿಲ್ಲೆಯ ಓಬದೇವನಹಳ್ಳಿಯ ಕೈಗಾರಿಕ ಪ್ರದೇಶದಲ್ಲಿ ತಾತ್ಕಾಲಿಕ ವಸತಿ ಗೃಹಗಳನ್ನು ನಿರ್ಮಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |

| | | |
|---|---|---|
| | | **ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ**<br><br>ಕರ್ನಾಟಕ ಕಾರ್ಮಿಕ ಮಂಡಳಿಗೆ 20:40 ರ ಅನುಪಾತದಲ್ಲಿ ಒಬ್ಬ ಕಾರ್ಮಿಕನಿಗೆ ಪ್ರತಿ ಕಾರ್ಮಿಕರಿಂದ ರೂ 20/- ಮತ್ತು ಪ್ರತಿ ಕಾರ್ಮಿಕರಿಗೆ ಮಾಲೀಕರಿಂದ ರೂ 40/- ರಂತೆ ವಂತಿಕೆಯನ್ನು ವರ್ಷಕ್ಕೆ ಒಂದು ಬಾರಿ ಪಾವತಿಸುವ ಸಂಘಟಿತ ಕಾರ್ಮಿಕರಿಗೆ ಕೆಳಕಂಡ ಕಲ್ಯಾಣ ಯೋಜನೆಗಳಡಿ ಸೌಲಭ್ಯಗಳನ್ನು ನೀಡಲಾಗುವುದು.<br>**1) ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ**<br>**2) ಕಾರ್ಮಿಕರಿಗೆ ವೈದ್ಯಕೀಯ ನೆರವು**<br>**3) ಕಾರ್ಮಿಕರಿಗೆ ಅಪಘಾತ ಧನ ಸಹಾಯ**<br>**4) ಮಹಿಳಾ ಕಾರ್ಮಿಕರಿಗೆ ಹೆರಿಗೆ ಭತ್ಯೆ ಸೌಲಭ್ಯ**<br>**5) ಮೃತ ಕಾರ್ಮಿಕನ ಅಂತ್ಯ ಸಂಸ್ಕಾರಕ್ಕೆ ಧನ ಸಹಾಯ**<br>**6) ವಾರ್ಷಿಕ ವೈದ್ಯಕೀಯ ತಪಾಸಣೆ ಶಿಬಿರ ಹಮ್ಮಿಕೊಳ್ಳುವ ಟ್ರೇಡ್ ಯೂನಿಯನ್/ಸಂಸ್ಥೆಗಳಿಗೆ ಧನಸಹಾಯ**<br>**7) ವಾರ್ಷಿಕ ಕ್ರೀಡಾ ಕೂಟ ಹಮ್ಮಿಕೊಳ್ಳುವ ನೊಂದಾಯಿತ ಕಾರ್ಮಿಕ ಸಂಘಗಳಿಗೆ ಧನಸಹಾಯ** |
| ಆ) | ನಗರಕ್ಕೆ ವಲಸೆ ಬರುವ ಕಾರ್ಮಿಕರ ಮಕ್ಕಳು ಮೂಲಭೂತ ಶಿಕ್ಷಣದಿಂದ ವಂಚಿತರಾಗುತ್ತಿರುವುದಲ್ಲದೆ ಅವರ ಭವಿಷ್ಯವು ಸಹ ಅಂಧಕಾರದಲ್ಲಿ ಮುಳುಗುವುದಾಗಿದ್ದು, ಈ ಮಕ್ಕಳ ಶಿಕ್ಷಣ ಹಾಗೂ ಉಜ್ವಲ ಭವಿಷ್ಯದ ನಿರ್ಮಾಣದಲ್ಲಿ ಸರ್ಕಾರದ ಪಾತ್ರವೇನು: (ವಿವರ ನೀಡುವುದು) | ವಲಸೆ ಕಾರ್ಮಿಕರ ಮಕ್ಕಳು ಸೇರಿದಂತೆ ಇತರೆ ಕಾರ್ಮಿಕರ ಮಕ್ಕಳಿಗೆ ವಿವಿಧ ಮಂಡಳಿಗಳು ಶೈಕ್ಷಣಿಕ ಧನಸಹಾಯವನ್ನು ಒದಗಿಸಲಾಗುತ್ತಿದ್ದು, ವಿವರ ಈ ಕೆಳಗಿನಂತಿದೆ:<br><br>**ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ**<br>ಈ ಮಂಡಳಿಯ ವತಿಯಿಂದ ಕಟ್ಟಡ ನಿರ್ಮಾಣ ಸ್ಥಳಗಳಲ್ಲಿ ಕಟ್ಟಡ ಕಾರ್ಮಿಕರ 06 ತಿಂಗಳಿನಿಂದ 6 ವರ್ಷದವರೆಗಿನ ಮಕ್ಕಳ ಪಾಲನೆಗಾಗಿ ಮಂಡಳಿಯ ವತಿಯಿಂದ ರಾಜ್ಯದ್ಯಾಂತ 100 ಕಿತ್ತೂರು ರಾಣಿ ಚೆನ್ನಮ್ಮ ಶಿಶು ಪಾಲನ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ಈ ಮಕ್ಕಳಿಗೆ ಅವಶ್ಯಕ ಸೌಲಭ್ಯಗಳೊಂದಿಗೆ ಮೂಲಭೂತ ಶಿಕ್ಷಣ ಒದಗಿಸಲಾಗುತ್ತಿದೆ. ಮಂಡಳಿಯ ವತಿಯಿಂದ ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಧನಸಹಾಯವನ್ನು ಒದಗಿಸುತ್ತಿದ್ದು, ಸದರಿ ವಿವರವನ್ನು **ಅನುಬಂಧ-1** ರಲ್ಲಿ ಒದಗಿಸಿದೆ.<br><br>ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ<br><br>ಈ ಮಂಡಳಿಗೆ 20:40 ರ ಅನುಪಾತದಲ್ಲಿ ಒಬ್ಬ ಕಾರ್ಮಿಕನಿಗೆ ಪ್ರತಿ ಕಾರ್ಮಿಕರಿಂದ ರೂ 20/- ಮತ್ತು ಪ್ರತಿ ಕಾರ್ಮಿಕರಿಗೆ ಮಾಲೀಕರಿಂದ ರೂ 40/- ರಂತೆ ವಂತಿಕೆಯನ್ನು ವರ್ಷಕ್ಕೆ ಒಂದು ಬಾರಿ ಪಾವತಿಸುವ ವಲಸೆ ಕಾರ್ಮಿಕರ ಮಕ್ಕಳಿಗೂ ಸಹ ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯವನ್ನು ಈ ಕೆಳಕಂಡಂತೆ ನೀಡಲಾಗುತ್ತಿದೆ. |

| | | |
|---|---|---|
| | | ಪ್ರೌಢ ಶಾಲೆ – ರೂ. 6000/–<br>**ಪದವಿ ಪೂರ್ವ – ರೂ. 8000/–**<br>ಪದವಿ – ರೂ. 10000/–<br>ಸ್ನಾತಕೋತ್ತರ – ರೂ. 12000/–<br>ಬಿ.ಇ. ಮತ್ತು ಎಂ.ಬಿ.ಬಿ.ಎಸ್. – ರೂ.20000/– |
| ಇ) | ಕಳೆದ ಮೂರು ವರ್ಷಗಳಲ್ಲಿ ಈ ವಲಸೆ ಕಾರ್ಮಿಕರ ದೈನಂದಿನ ಜೀವನದ ಉನ್ನತಿಗಾಗಿ ಸರ್ಕಾರವು ಯಾವ ಯಾವ ಯೋಜನೆಗಳನ್ನು ಜಾರಿ ಮಾಡಿದೆ; ಈ ಯೋಜನೆಗಳ ಮೂಲಕ ಎಷ್ಟು ಮೊತ್ತವನ್ನು ವೆಚ್ಚ ಮಾಡಲಾಗಿದೆ? (ಈ ಯೋಜನೆಗಳ ಫಲಾನುಭವಿಗಳ ಸಂಖ್ಯೆ ಎಷ್ಟು ವಿವರ ನೀಡುವುದು) | ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ವತಿಯಿಂದ ಕಳೆದ ಮೂರು ವರ್ಷದಲ್ಲಿ ನೋಂದಾಯಿತ ವಲಸೆ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರನ್ನು ಸೇರಿದಂತೆ ಮತ್ತು ಅವರ ಅವಲಂಭಿತರಿಗೆ ಅನುಷ್ಠಾನ ಮಾಡಿರುವ ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳ ವಿವರವನ್ನು **ಅನುಬಂಧ–02** ರಲ್ಲಿ ನೀಡಲಾಗಿದೆ.<br>ಈ ಸೌಲಭ್ಯಗಳಡಿ 5549941 ಫಲಾನುಭವಿಗಳಿಗೆ ರೂ.2850.04 ಕೋಟಿ ಸಹಾಯಧನ ಬಿಡುಗಡೆ ಮಾಡಲಾಗಿದೆ. |

**ಕಾಇ 704 ಎಲ್‌ಇಟಿ 2022**

*(ಅರಬೈಲ್ ಶಿವರಾಂ ಹೆಬ್ಬಾರ್)*
*ಕಾರ್ಮಿಕ ಸಚಿವರು*

## ಅನುಬಂಧ-1

ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಎನ್. ರವಿಕುಮಾರ್
(ವಿಧಾನಸಭೆಯಿಂದ ಚುನಾಯಿತರಾದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 585

ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ನೋಂದಾಯಿತ ಫಲಾನುಭವಿಗಳಿಗೆ ಮತ್ತು ಅವರ ಅವಲಂಭಿತರಿಗೆ ಸಹಾಯಧನ ನೀಡಲು ಈ ಕೆಳಕಂಡ 25 ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ರೂಪಿಸಲಾಗಿದೆ:

1. **ಪಿಂಚಣಿ ಸೌಲಭ್ಯ:** ಮೂರು ವರ್ಷ ಸದಸ್ಯತ್ವದೊಂದಿಗೆ 60 ವರ್ಷ ಪೂರೈಸಿದ ಫಲಾನುಭವಿಗೆ ಮಾಸಿಕ **ರೂ.3,000/-**
2. **ಕುಟುಂಬ ಪಿಂಚಣಿ ಸೌಲಭ್ಯ:** ಮೃತ ಪಿಂಚಣಿದಾರರ ಪತಿ / ಪತ್ನಿ ಮಾಸಿಕ **ರೂ.1500/-**
3. **ದುರ್ಬಲತೆ ಪಿಂಚಣಿ:** ನೋಂದಾಯಿತ ಫಲಾನುಭವಿಯು ಖಾಯಿಲೆಗಳಿಂದ ಅಥವಾ ಕಟ್ಟಡ ಕಾಮಗಾರಿಗಳ ಅಪಘಾತದಿಂದ ಶಾಶ್ವತ/ಭಾಗಶಃ ಅಂಗವಿಕಲತೆ ಹೊಂದಿದ್ದರೆ ಮಾಸಿಕ **ರೂ.2,000/-** ಪಿಂಚಣಿ ಹಾಗೂ ಶೇಕಡವಾರು ದುರ್ಬಲತೆಯನ್ನಾಧರಿಸಿ **ರೂ.2,00,000/-** ದವರೆಗೆ ಅನುಗ್ರಹ ರಾಶಿ ಸಹಾಯಧನ.
4. **ಕನ್ನಡಕ, ಶ್ರವಣಯಂತ್ರ, ಕೃತಕ ಕೈಕಾಲು ಮತ್ತು ಗಾಲಿ ಕುರ್ಚಿ** ಮರುಪಾವತಿ ಸೌಲಭ್ಯ
5. **ಟ್ರೈನಿಂಗ್-ಕಮ್-ಟೂಲ್‌ಕಿಟ್ ಸೌಲಭ್ಯ (ಶ್ರಮ ಸಾಮರ್ಥ್ಯ) : ರೂ.20,000/- ವರೆಗೆ**
6. **ಶ್ರಮ ಸಂಸಾರ ಸಾಮರ್ಥ್ಯ ತರಬೇತಿ ಸೌಲಭ್ಯ:** ನೋಂದಾಯಿತ ಫಲಾನುಭವಿಯ ಅವಲಂಭಿತರಿಗೆ
7. **ವಸತಿ ಸೌಲಭ್ಯ (ಕಾರ್ಮಿಕ ಗೃಹ ಭಾಗ್ಯ): ರೂ.2,00,000/-** ದವರೆಗೆ ಮುಂಗಡ ಸೌಲಭ್ಯ
8. **ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀ ಬಾಂಡ್):** ಮಹಿಳಾ ಫಲಾನುಭವಿಯ ಮೊದಲ ಎರಡು ಮಗುವಿನ ಜನನಕ್ಕೆ **ರೂ.50,000/-**
9. **ಶಿಶು ಪಾಲನಾ ಸೌಲಭ್ಯ: ರಾಜ್ಯದಾದ್ಯಂತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಮಕ್ಕಳ ಪಾಲನೆಗಾಗಿ 100 ಕಿತ್ತೂರು ರಾಣಿ ಚೆನ್ನಮ್ಮ ಶಿಶು ಪಾಲನಾ ಕೇಂದ್ರಗಳ ಸ್ಥಾಪನೆ.**
10. **ಅಂತ್ಯಕ್ರಿಯೆ ವೆಚ್ಚ :ರೂ.4,000/-** ಹಾಗೂ ಅನುಗ್ರಹ ರಾಶಿ **ರೂ.71,000/-**ಸಹಾಯಧನ
11. **ಶೈಕ್ಷಣಿಕ ಸಹಾಯಧನ (ಕಲಿಕೆ ಭಾಗ್ಯ): ಫಲಾನುಭವಿಯ ಇಬ್ಬರು ಮಕ್ಕಳ ವಿದ್ಯಾಭ್ಯಾಸಕ್ಕಾಗಿ:**

| ಕ್ರ.ಸಂ | ತರಗತಿ (ಉತ್ತೀರ್ಣಕ್ಕೆ) | |
|---|---|---|
| 1 | ಕೆಜಿ/ ಪೂರ್ವ ಶಾಲೆ /ನರ್ಸರಿ (ವರ್ಷ 3 ರಿಂದ 5) | **5,000** |
| 2 | 1 ರಿಂದ 4ನೇ ತರಗತಿ | **5,000** |
| 3 | 5 ರಿಂದ 8ನೇ ತರಗತಿ | **8,000** |
| 4 | 9 ಹಾಗೂ 10ನೇ ತರಗತಿ | **12,000** |
| | ಪದವಿ ಪೂರ್ವ | |
| 5 | ಪ್ರಥಮ ಪಿಯುಸಿ ಮತ್ತು ದ್ವಿತೀಯಪಿ.ಯು.ಸಿ | **15,000** |
| 6 | ಪಾಲಿಟೆಕ್ನಿಕ್ / ಡಿಪ್ಲಮಾ/ ಐಟಿಐ | **20,000** |
| 7 | ಬಿಎಸ್‌ಸಿ ನರ್ಸಿಂಗ್/ ಜಿಎನ್‌ಎಮ್/ ಎಎನ್‌ಎಮ್/ ಪಾರಮೆಡಿಕಲ್ ಕೋರ್ಸ್ | **40,000** |

| | | |
|---|---|---|
| 8 | ಡಿ.ಎಡ್ | 25,000 |
| | ಬಿ.ಎಡ್ | 35,000 |
| 9 | ಪದವಿ ಪ್ರತಿ ವರ್ಷಕ್ಕೆ (ಯಾವುದೇ ಪದವಿ) | 25,000 |
| 10 | ಎಲ್ಎಲ್ಬಿ / ಎಲ್ಎಲ್ಎಮ್ | 30,000 |
| 11 | ಸ್ನಾತಕೋತ್ತರ ಪದವಿ ಸೇರ್ಪಡೆಗೆ | 35,000 ಗರಿಷ್ಠ 2 ವರ್ಷ ಅವಧಿಗೆ ಒಳಪಟ್ಟು |
| | **ತಾಂತ್ರೀಕ/ ವೈಧ್ಯಕೀಯ ಎನ್ಇಇಟಿ ಅಥವಾ ಕೆಸಿಇಟಿ** | |
| 12 | ಬಿಇ / ಬಿ.ಟೆಕ್ ಅಥವಾ ಸಂಬಂಧಪಟ್ಟ ಯೂಜಿ ಕೋರ್ಸ್ | ಸದರಿ ಕೋರ್ಸ್‌ನ ಗರಿಷ್ಠ 2 ವರ್ಷ ಅವಧಿಗೆ ಒಳಪಟ್ಟು ವಾರ್ಷಿಕ ರೂ.50,000 |
| 13 | ಎಮ್.ಟೆಕ್/ ಎಮ್ ಇ (ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕ್ಕೊತ್ತರ ಕೋರ್ಸ್) | ಸದರಿ ಕೋರ್ಸ್‌ನ ಗರಿಷ್ಠ ಅವಧಿಗೆ ಒಳಪಟ್ಟು ವಾರ್ಷಿಕ ರೂ. 60,000 |
| 14 | ವೈದ್ಯಕೀಯ (ಎಮ್‌ಬಿಬಿಎಸ್ /ಬಿಎಎಮ್ಎಸ್ / ಬಿಡಿಎಸ್ /ಬಿಹೆಚ್ಎಮ್ಎಸ್ ಕೋರ್ಸ್‌ಗೆ ಅಥವಾ ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕ್ಕೊತ್ತರ ಕೋರ್ಸ್ | ರೂ.60,000 (ಸದರಿ ಕೋರ್ಸ್‌ನ ಗರಿಷ್ಠ ಅವಧಿಗೆ ಒಳಪಟ್ಟು ) |
| | ಎಮ್‌ಡಿ | ರೂ. 75,000 (ಸದರಿ ಕೋರ್ಸ್‌ನ ಗರಿಷ್ಠ ಅವಧಿಗೆ ಒಳಪಟ್ಟು) |
| 15 | ಪಿಹೆಚ್‌ಡಿ / ಎಮ್. ಫಿಲ್ (ಯಾವುದೇ ವಿಷಯ) | ಪಿಹೆಚ್‌ಡಿಗೆ ಗರಿಷ್ಠ ಮೂರು ವರ್ಷಗಳಿಗೆ ಹಾಗೂ ಎಮ್‌ಫಿಲ್‌ಗೆ 1 ವರ್ಷಕ್ಕೆ ಪ್ರತಿ ವರ್ಷ ರೂ. 25,000 (ಯೂಜಿಸಿಯ ಜೂನಿಯರ್ ರಿಸರ್ಚ್ ಫೆಲೋಶಿಫ್‌ಗೆ ಆಯ್ಕೆಯಾಗಿರುವ ಅಭ್ಯರ್ಥಿಗಳು ಹಾಗೂ ಕೇಂದ್ರ ಮತ್ತು ರಾಜ್ಯ ಸರ್ಕಾರದಲ್ಲಿ ಕೆಲಸ ನಿರ್ವಹಿಸುತ್ತಿರುವ ಅಭ್ಯರ್ಥಿಗಳು ಹಾಗೂ ಯೂಜಿಸಿ ನಿಯಮಗಳನ್ವಯ ವೇತನ ಅನುದಾನಕ್ಕೆ ಒಳಪಡುವ ಹುದ್ದೆಗಳಲ್ಲಿ ಅನುದಾನಿತ ಕಾಲೇಜುಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಆಭ್ಯರ್ಥಿಗಳು ಈ ಸೌಲಭ್ಯವನ್ನು ಪಡೆಯಲು ಅರ್ಹರಿರುವುದಿಲ್ಲ. |
| 16 | ಐಐಟಿ/ಐಐಐಟಿ/ ಐಐಎಮ್/ ಎನ್ಐಟಿ/ ಐಐಎಸ್ಇಆರ್/ ಎಐಐಎಮ್ಎಸ್ /ಎನ್ಎಲ್‌ಯೂ ಮತ್ತು ಭಾರತ ಸರ್ಕಾರದ ಮಾನ್ಯತೆ ಪಡೆದ ಕೋರ್ಸ್‌ಗಳು | ಪಾವತಿಸಿದ ಬೋದನಾ ಶುಲ್ಕ |

12. **ವೈದ್ಯಕೀಯ ಸಹಾಯಧನ (ಕಾರ್ಮಿಕ ಆರೋಗ್ಯ ಭಾಗ್ಯ): ನೋಂದಾಯಿತ ಫಲಾನುಭವಿ ಹಾಗೂ ಅವರ** ಅವಲಂಭಿತರಿಗೆ **ರೂ.300/-** ರಿಂದ **ರೂ.20,000/-ವರೆಗೆ**
13. **ಅಪಘಾತ ಪರಿಹಾರ:** ಮರಣ ಹೊಂದಿದ್ದಲ್ಲಿ **ರೂ.5,00,000/-,** ಸಂಪೂರ್ಣ ಶಾಶ್ವತ ದುರ್ಬಲತೆಯಾದಲ್ಲಿ **ರೂ.2,00,000/-** ಮತ್ತು ಭಾಗಶಃ ಶಾಶ್ವತ ದುರ್ಬಲತೆಯಾದಲ್ಲಿ **ರೂ.1,00,000/-**
14. **ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕ ಚಿಕಿತ್ಸಾ ಭಾಗ್ಯ):** ಹೃದ್ರೋಗ, ಕಿಡ್ನಿ ಜೋಡಣೆ, ಕ್ಯಾನ್ಸರ್ ಶಸ್ತ್ರಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತ್ರಚಿಕಿತ್ಸೆ, ಗರ್ಭಕೋಶ ಶಸ್ತ್ರಚಿಕಿತ್ಸೆ, ಅಸ್ತಮ ಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದ ತೊಂದರೆಗೆ ಸಂಬಂಧಿತ ಚಿಕಿತ್ಸೆ, ಮೂತ್ರ ಪಿಂಡದಲ್ಲಿನ ಕಲ್ಲುತೆಗೆಯುವಚಿಕಿತ್ಸೆ, ಮೆದುಳಿನ ರಕ್ತಸ್ರಾವದ ಚಿಕಿತ್ಸೆ, ಅಲ್ಸರ್ ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ, ಕಿಡ್ನಿ ಶಸ್ತ್ರಚಿಕಿತ್ಸೆ, ಇ.ಎನ್.ಟಿ. ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕ್ಯೂಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಕರುಳಿನ ಶಸ್ತ್ರಚಿಕಿತ್ಸೆ, ಸ್ತನ ಸಂಬಂಧಿತ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆ ಮುರಿತ/ಡಿಸ್‌ಲೊಕೇಶನ್ ಚಿಕಿತ್ಸೆ, ಇತರೆ ಔದ್ಯೋಗಿಕ ಖಾಯಿಲೆಗಳ ಚಿಕಿತ್ಸೆಗಳಿಗೆ **ರೂ.2,00,000/-**ವರೆಗೆ
15. **ಮದುವೆ ಸಹಾಯಧನ (ಗೃಹ ಲಕ್ಷ್ಮೀ ಬಾಂಡ್):** ಫಲಾನುಭವಿ ಅಥವಾ ಅವರ ಇಬ್ಬರು ಮಕ್ಕಳ ಮದುವೆಗೆ ತಲಾ **ರೂ.60,000/-**
16. **ಫಲಾನುಭವಿಯ ಮಕ್ಕಳು ಯುಪಿಎಸ್‌ಸಿ, ಕೆಪಿಎಸ್‌ಸಿ ಹುದ್ದೆಗಳಿಗಾಗಿ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಲು ಪ್ರತಿಷ್ಠಿತ ಸಂಸ್ಥೆಗಳಿಂದ ತರಬೇತಿ ಮತ್ತು ಅವರ ಮಕ್ಕಳು ಹೊರದೇಶಗಳಲ್ಲಿ ಉನ್ನತ ವ್ಯಾಸಂಗ ಮಾಡಲು ತಗಲುವ ವೆಚ್ಚವನ್ನು ಮಂಡಳಿವತಿಯಿಂದ ಭರಿಸಲಾಗುವುದು.**
17. **ಬಿಎಂಟಿಸಿ ಬಸ್ ಪಾಸ್ ಸೌಲಭ್ಯ:** ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕೆಲಸ ಮಾಡುತ್ತಿರುವಂತಹ / ವಾಸಸ್ಥಳದಿಂದ ಬೆಂಗಳೂರಿಗೆ ಪ್ರಯಾಣಿಸುವ ನೋಂದಾಯಿತ ಕಟ್ಟಡ ಕಾರ್ಮಿಕರಿಗೆ
18. **ಕೆಎಸ್‌ಆರ್‌ಟಿಸಿ ಬಸ್ ಪಾಸ್‌ನ ಸೌಲಭ್ಯ:** ನೋಂದಾಯಿತ ಫಲಾನುಭವಿಗಳಿಗೆ **ಕೆಎಸ್‌ಆರ್‌ಟಿಸಿ ಬಸ್ ಪಾಸ್‌ನ ವಿತರಣೆ**
19. **ತಾಯಿ ಮಗು ಸಹಾಯ ಹಸ್ತ:** ಮಹಿಳಾ ಫಲಾನುಭವಿಯು ಮಗುವಿಗೆ ಜನ್ಮ ನೀಡಿದ ಸಂದರ್ಭದಲ್ಲಿ ಆಕೆಯ ಮಗುವಿನ ಶಾಲಾ ಪೂರ್ವ ಶಿಕ್ಷಣ ಮತ್ತು ಪೌಷ್ಠಿಕತೆಗಾಗಿ ಮಗುವಿಗೆ ಮೂರು ವರ್ಷಗಳು ತುಂಬುವವರೆಗೆ ವಾರ್ಷಿಕ **ರೂ.6,000/-** ಗಳ ಸಹಾಯಧನ.
20. ಇಮ್ಯೂನಿಟಿ ಬೂಸ್ಟರ್‌ಕಿಟ್ ವಿತರಣೆ
21. ಪ್ರಿವೆಂಟಿವ್ ಹೆಲ್ತ್‌ಕೇರ್‌ಯೋಜನೆ
22. ಮೋಬೈಲ್ ಮೆಡಿಕಲ್‌ಕೇರ್ ಯೂನಿಟ್
23. ಪೈಲಟ್ ಟ್ರೈನಿಂಗ್: ಫಲಾನುಭವಿಯ ಆಯ್ಕೆಯಾದ ಮಕ್ಕಳಿಗೆ
24. ವಿದೇಶದಲ್ಲಿ ವಿದ್ಯಾಬ್ಯಾಸಕ್ಕಾಗಿ ಶೈಕ್ಷಣಿಕ ಸಹಾಯಧನ ಸೌಲಭ್ಯ
25. ನ್ಯೂಟ್ರೀಶನ್‌ಕಿಟ್ಸ್:

ಅನುಬಂಧ–02

ಕಳೆದ ಮೂರು ವರ್ಷದಲ್ಲಿ ವಿವಿಧಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳಡಿ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ವತಿಯಿಂದ ವಿತರಿಸಲಾದ ವರ್ಷವಾರು ಸಾಧನೆಯ ವಿವರ

| ಸೌಲಭ್ಯಗಳ ವಿವರ | 2019–20 | | 2020–21 | | 2021–2022 | | ಒಟ್ಟು | |
|---|---|---|---|---|---|---|---|---|
| | ಸಂಖ್ಯೆ | ಮೊತ್ತ | ಸಂಖ್ಯೆ | ಮೊತ್ತ | ಸಂಖ್ಯೆ | ಮೊತ್ತ | ಸಂಖ್ಯೆ | ಮೊತ್ತ |
| ಶೈಕ್ಷಣಿಕ ಸಹಾಯಧನ | 1,25,403 | 72,47,88,917 | 1,15,538 | 86,93,66,430 | 3,38,738 | 4,60,76,79,730 | 5,79,679 | 6,20,18,35,077 |
| ಮದುವೆ ಸಹಾಯಧನ | 10,966 | 45,35,96,000 | 16,183 | 41,97,30,000 | 38,401 | 1,58,44,50,000 | 65,550 | 2,45,77,76,000 |
| ಅಂತ್ಯ ಸಂಸ್ಕಾರಕ್ಕೆ ವೆಚ್ಚ ಹಾಗೂ ಅನುಗ್ರಹ ರಾಶಿ | 3,674 | 19,86,41,000 | 3,342 | 18,07,06,000 | 7,082 | 38,47,12,400 | 14,098 | 76,40,59,400 |
| ಪ್ರಮುಖ ವೈದ್ಯಕೀಯ ಸಹಾಯಧನ | 778 | 2,26,68,307 | 1,235 | 4,67,00,314 | 2,376 | 11,41,30,368 | 4,389 | 18,34,98,989 |
| ಅಪಘಾತ ಪರಿಹಾರ | 116 | 3,19,57,000 | 129 | 2,20,59,000 | 354 | 7,45,26,500 | 599 | 12,85,42,500 |
| ನೊಂದಾಯಿತರಲ್ಲದ ಕಟ್ಟಡ ಕಾರ್ಮಿಕರ ಮರಣ ಪರಿಹಾರ | 0 | 0 | 14 | 29,00,000 | 15 | 34,04,000 | 29 | 63,04,000 |
| ಹೆರಿಗೆ ಸಹಾಯಧನ | 572 | 1,19,30,174 | 81 | 16,50,000 | 1,798 | 4,44,89,000 | 2,451 | 5,80,69,174 |
| ವೈದ್ಯಕೀಯ ವೆಚ್ಚ ಸಹಾಯಧನ | 95 | 20,19,557 | 212 | 25,30,550 | 598 | 35,07,053 | 905 | 80,57,160 |
| ಪಿಂಚಣಿ ಸೌಲಭ್ಯ | 0 | 0 | 643 | 2,86,24,000 | 4,925 | 5,55,25,000 | 5,568 | 8,41,49,000 |
| ದುರ್ಬಲತೆ ಪಿಂಚಣಿ | 627 | 2,30,26,000 | 5 | 12,90,000 | 110 | 77,67,000 | 742 | 3,20,83,000 |
| ಕುಟುಂಬ ಪಿಂಚಣಿ | 16 | 29,99,000 | 5 | 24,000 | 16 | 92,000 | 37 | 31,15,000 |
| ಅನಿಲ ಭಾಗ್ಯಯೋಜನೆ | 0 | 0 | 0 | 0 | | | 0 | 0 |
| ಶ್ರಮ ಸಾಮರ್ಥ್ಯ–ಟೂಲ್‌ಕಿಟ್‌ಯೋಜನೆ | 0 | 0 | 40,385 | 5,71,47,550 | 70,645 | 54,48,84,908 | 1,11,030 | 60,20,32,458 |
| ಬಿಎಂಟಿಸಿ ಬಸ್ ಪಾಸ್ | 623 | 9,01,70,239 | 50,969 | 59,49,39,450 | 12,581 | 15,50,59,800 | 64,173 | 84,01,69,489 |

| | | | | | | | | |
|---|---|---|---|---|---|---|---|---|
| ಕೆಎಸ್‌ಆರ್‌ಟಿಸಿ ಬಸ್ ಪಾಸ್ | 2,996 | 5,94,300 | 0 | 0 | 0 | 0 | 2,996 | 5,94,300 |
| ವಸತಿ ಸೌಲಭ್ಯ | 5,129 | 76,00,00,000 | 0 | 0 | 0 | 0 | 5,129 | 76,00,00,000 |
| ಶಿಶು ಪಾಲನಾ ಸೌಲಭ್ಯ | 501 | 30,00,000 | 218 | 57,63,296 | 3,350 | 8,40,06,822 | 4,069 | 9,27,70,118 |
| ತಾಯಿ ಮಗು ಸಹಾಯ ಹಸ್ತ ಯೋಜನೆ | 0 | 0 | 27 | 1,62,000 | 616 | 36,96,000 | 643 | 38,58,000 |
| ಇಮ್ಯೂನಿಟಿಕಿಟ್ | 0 | 0 | 0 | 0 | 9,50,000 | 98,54,50,670 | 9,50,000 | 98,54,50,670 |
| ಐಎಎಸ್/ಕೆಎಎಸ್‌ತರಬೇತಿಯೋಜನೆ | 0 | 0 | 0 | 0 | 0 | 0 | 0 | 0 |
| ಪ್ರಿವೆಂಟಿವ್ ಹೆಲ್ತ್‌ಕೇರ್‌ಯೋಜನೆ | 0 | 0 | 0 | 0 | 1,23,664 | 83,89,87,500 | 1,23,664 | 83,89,87,500 |
| ಸಂಚಾರಿಆರೋಗ್ಯಕ್ಲಿನಿಕ್‌ಯೋಜನೆ | 0 | 0 | 0 | 0 | 3,818 | 2,74,90,055 | 3,818 | 2,74,90,055 |
| ತಾತ್ಕಾಲಿಕ ವಸತಿ ಸಮುಚ್ಚಯಯೋಜನೆ | 0 | 0 | 0 | 0 | 0 | 0 | 0 | 0 |
| ನ್ಯೂಟ್ರೀಶನ್‌ಕಿಟ್ | 0 | 0 | 0 | 0 | 0 | 0 | 0 | 0 |
| ಕೋವಿಡ್-19 (ರೊ.5000/3000)ಗಳ ಪರಿಹಾರ | 0 | 0 | 16,48,431 | 8,24,21,55,000 | 19,61,941 | 5,88,58,23,000 | 36,10,372 | 14,12,79,78,000 |
| 2021-22ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರಿಕ್ಷೇಯಲ್ಲಿ 600ಕ್ಕಿಂತ ಹೆಚ್ಚು ಅಂಕ ಪಡೆದ ಮಕ್ಕಳಿಗೆ ಪ್ರೋತ್ಸಾಹಧನ | 0 | 0 | 0 | 0 | 0 | 0 | 0 | 0 |
| 6ರಿಂದ 10ನೇ ತರಗತಿ ವ್ಯಾಸಂಗ ಮಾಡುತ್ತಿರುವಕಾರ್ಮಿಕರ ಮಕ್ಕಳಿಗೆ ಟ್ಯಾಬ್‌ಯೊಜನೆ | 0 | 0 | 0 | 0 | 0 | 0 | 0 | 0 |
| ಐಇಸಿ ಚಟುವಟಿಕೆ ಪ್ರಚಾರ | 0 | 0 | | 7,53,14,240 | | 21,82,88,313 | 0 | 29,36,02,553 |
| ಶಾಲಾ ಕಿಟ್ | 0 | 0 | 0 | 0 | 0 | 0 | 0 | 0 |
| ಒಟ್ಟು | **1,51,496** | **2,32,53,90,494** | **18,77,417** | **10,55,10,61,830** | **35,21,028** | **15,62,39,70,119** | **55,49,941** | **28,50,04,22,443** |